13-14

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ: ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟೆಡ್ ರವರಿಗೆ ಹಂಚಿಕೆಯಾಗಿರುವ 2.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು 6.3 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರದ ಆದೇಶ ಸಂಖ್ಯೆ : ಇಎನ್ 204 ಎನ್‌ಸಿಇ 2005 ದಿನಾಂಕ : 2.9.2005.
2) ಸರ್ಕಾರದ ಆದೇಶ ಸಂಖ್ಯೆ : ಇಎನ್ 199 ಎನ್‌ಸಿಇ 2006 ದಿನಾಂಕ : 15.11.2006.
3) ಸರ್ಕಾರದ ಆದೇಶ ಸಂಖ್ಯೆ : ಇಎನ್ 56 ಎನ್‌ಸಿಇ 2012 ದಿನಾಂಕ : 2.4.2013.
4) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: ಕೆಆರ್‌ಇಡಿ/08/MMCL-2.00 to 6.3 MW-Gadag/2013/1105 ದಿನಾಂಕ: 10.5.2013.
5) ದಿನಾಂಕ : 05-9-2013ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

3167
8/11/13

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ:: ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟೆಡ್ ರವರಿಗೆ ಬೆಳಗಾವಿ, ಬಳ್ಳಾರಿ, ಚಿತ್ರದುರ್ಗ, ಧಾರವಾಡ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಒಟ್ಟು 29.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕೆಲವೊಂದು ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ಈ ರೀತಿ, ಹಂಚಿಕೆಯಾಗಿದ್ದ 29.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ ಸದರಿ ಆದೇಶದ ಕ್ರಮ ಸಂಖ್ಯೆ (2), (3), (5) ಮತ್ತು (6)ರ ಶೆಡ್ಯೂಲ್‌ನಲ್ಲಿ ನಮೂದಿಸಿದ್ದ ಒಟ್ಟು 19.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ರದ್ದುಗೊಳಿಸಿ ಆದೇಶಿಸಲಾಗಿತ್ತು. ಅದೇ ರೀತಿ, ಅನುಷ್ಠಾನಕ್ಕೆ ಬಾಕಿ ಉಳಿದಿದ್ದ 10.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ ಮೂಲ ಹಂಚಿಕೆ ಆದೇಶದ ಶೆಡ್ಯೂಲ್‌ನ ಕ್ರಮ ಸಂಖ್ಯೆ (1)ರಲ್ಲಿ ನಮೂದಿಸಿದ್ದ 8.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಆದೇಶದಲ್ಲಿ ರದ್ದುಗೊಳಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ : ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟೆಡ್ ರವರಿಗೆ ಸರ್ಕಾರದ ಅದೇಶ ಸಂಖ್ಯೆ ಇಎನ್ 204 ಎನ್‌ಸಿಇ 2005 ದಿನಾಂಕ: 02.9.2005ರನ್ವಯ ಮಂಜೂರಾಗಿದ್ದ ಒಟ್ಟು 29.5 ಮೆ.ವ್ಯಾ. ಸಾಮರ್ಥ್ಯದಲ್ಲಿ ವಿವಿಧ ಆದೇಶಗಳನ್ವಯ 27.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯು ರದ್ದುಗೊಂಡಿದ್ದು, ಸದರಿ ಆದೇಶದ ಶೆಡ್ಯೂಲ್‌ನ ಕ್ರಮ ಸಂಖ್ಯೆ (4)ರಲ್ಲಿ ಗದಗ ಜಿಲ್ಲೆಯ, ಶಿರಹಟ್ಟಿ ತಾಲ್ಲೂಕಿನ ಗೋಜನೂರು ಬಳಿಯ ಲಕ್ಷ್ಮೇಶ್ವರ ಗ್ರಾಮದಲ್ಲಿ ಅನುಷ್ಠಾನಕ್ಕೆ ಬಾಕಿ ಉಳಿದಿರುವ 2.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 6.3 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತಂತೆ, ಅಭಿವೃದ್ಧಿದಾರರು ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಿದ್ದು, ಈ ಯೋಜನೆಯ ಅನುಷ್ಠಾನಕ್ಕೆ ಕಂದಾಯ ಇಲಾಖೆಯಿಂದ 20.31 ಭೂಮಿಯು ಗುತ್ತಿಗೆ ಆಧಾರದ ಮೇಲೆ ಮಂಜೂರಾಗಿರುವುದಾಗಿ ತಿಳಿಸಿರುತ್ತಾರೆ. ಹೆಚ್ಚಳಗೊಳ್ಳುವ ಸಾಮರ್ಥ್ಯವನ್ನು ಈಗಾಗಲೇ ಮಂಜೂರಾಗಿರುವ ಕಂದಾಯ ಭೂಮಿಯಲ್ಲಿಯೇ ಅನುಷ್ಠಾನಗೊಳಿಸುವುದಾಗಿ, ಸಾಮರ್ಥ್ಯ ಹೆಚ್ಚಳಕ್ಕೆ ಸಂಬಂಧಿಸಿದಂತೆ ಅಭಿವೃದ್ಧಿದಾರರು ನಿಗಧಿತ ಶುಲ್ಕ ಪಾವತಿಸಿದ್ದು, ಈ ಯೋಜನೆಯಿಂದ ಉತ್ಪಾದನೆ ಆಗುವ ವಿದ್ಯುತ್ತನ್ನು ಸಂಬಂಧಿಸಿದ ಎಸ್ಕಾಂನೊಂದಿಗೆ ಪಿಪಿಎ ಅಥವಾ 3ನೇ ವ್ಯಕ್ತಿಯೊಂದಿಗೆ ಮಾರಾಟ ಮಾಡುವ ಹಾಗೂ ಯೋಜನೆಯನ್ನು ದಿನಾಂಕ : 31.03.2014ರ ಒಳಗಾಗಿ ಅನುಷ್ಠಾನಗೊಸುವ ಷರತ್ತಿಗೊಳಪಟ್ಟು ಸಾಮರ್ಥ್ಯವನ್ನು ಹೆಚ್ಚಿಸಬಹುದೆಂಬ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

S/U
AGM(W)
pertaining to section
wind & AGM(W)
J/C 8/11

13721
11.11.13

11/11/13

.......2)

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ದಿನಾಂಕ : 05.9.2013ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಮೆ:: ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟಡ್ ರವರಿಗೆ ಗದಗ ಜಿಲ್ಲೆಯ. ಶಿರಹಟ್ಟಿ ತಾಲ್ಲೂಕಿನ ಗೋಜನೂರು ಬಳಿಯ ಲಕ್ಷ್ಮೇಶ್ವರ ಗ್ರಾಮದಲ್ಲಿ ಹಂಚಿಕೆಯಾಗಿ ಅನುಷ್ಠಾನಕ್ಕೆ ಬಾಕಿ ಉಳಿದಿರುವ ಅಂಶಿಕ ಸಾಮರ್ಥ್ಯವಾದ 2.00 ಮೆ.ವ್ಯಾ. ಪವನ ವಿದ್ಯುತ್ ಯೋಜನೆಯ ಸಾಮರ್ಥವನ್ನು 6.3 ಮೆ.ವ್ಯಾ.ಗೆ ಹೆಚ್ಚಿಸುವ ಪ್ರಸ್ತಾವನೆಗೆ ಸಮಿತಿಯು ಅನುಮೋದನೆ ನೀಡಿರುತ್ತದೆ.

ಸದರಿ ಯೋಜನೆಯನ್ನು ಪ್ರಥಮವಾಗಿ ದಿನಾಂಕ : 02.9.2005ರಲ್ಲಿ ಹಂಚಿಕೆ ಮಾಡಲಾಗಿದ್ದು, ಇದರ ಅವಧಿಯು ದಿನಾಂಕ : 31.12.2011ಕ್ಕೆ ಮುಕ್ತಾಯಗೊಂಡಿರುತ್ತದೆ. ಅದ್ದರಿಂದ, ದಿನಾಂಕ : 01.1.2012ರಿಂದ ನಿಯಮಾನುಸಾರ ಕಾಲಾವಧಿ ವಿಸ್ತರಣಾ ಶುಲ್ಕ ಪಾವತಿಸುವ ಷರತ್ತಿಗೊಳಪಟ್ಟು ಸಾಮರ್ಥ್ಯ ಹೆಚ್ಚಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 151 ಎನ್‌ಸಿಇ 2013,**
**ಬೆಂಗಳೂರು, ದಿನಾಂಕ: 25.10.2013.**

ಮೆ:: ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟೆಡ್ ರವರಿಗೆ ಗದಗ ಜಿಲ್ಲೆಯ, ಶಿರಹಟ್ಟಿ ತಾಲ್ಲೂಕಿನ ಗೋಜನೂರು ಬಳಿಯ ಲಕ್ಷ್ಮೇಶ್ವರ ಗ್ರಾಮದಲ್ಲಿ ಹಂಚಿಕೆಯಾಗಿ ಅನುಷ್ಠಾನಕ್ಕೆ ಬಾಕಿ ಉಳಿದಿರುವ 2.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥವನ್ನು 6.3 ಮೆ.ವ್ಯಾ.ಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಹೆಚ್ಚಿಸಿ ಆದೇಶಿಸಲಾಗಿದೆ :-

## SHEDULE

| Near by villages of the proposed area and District | Geographical area description of the project | Sanctioned capacity in MW | Enhancement proposed in MW | No. of WTGs & rating in Kw | Total capacity including proposed enhancement in MW |
|---|---|---|---|---|---|
| Gojanur, Laxmishvara, Shirahatti Taluk, Gadag District. | A small narrow E-W oriented hillock located on the N-W of Gonur village. The proposed area is covered in the following Geographical co-ordinates: **Latitude**: 15°11'8"- 15°11'38 N **Longitude**: 75°28'47- 75°30'0" E **Ridge Peaks**: 748m Amsl. | 2.00 MW | 4.3 MW | 3 Nos x 2100 Kw | 6.3 MW |

1. **ಮೆ:: ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟೆಡ್** ರವರು ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ, ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.
2. **ಮೆ:: ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟೆಡ್** ರವರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಾನುಸಾರ ಪಿಪಿಎ ಅಥವಾ 3ನೇ ವ್ಯಕ್ತಿಯೊಂದಿಗೆ ವಿದ್ಯುತ್ ಮಾರಾಟ ಮಾಡುವ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.
3. **ಮೆ:: ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟೆಡ್** ರವರು ಯೋಜನೆಯನ್ನು ದಿನಾಂಕ 31.3.2014ರೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
4. **ಮೆ:: ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟೆಡ್** ರವರು 2.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ದಿನಾಂಕ: 01.01.2012 ರಿಂದ 31.3.2014ರವರೆಗೆ ನಿಯಮಾನುಸಾರ ನಿಗಧಿತ ಕಾಲಾವಧಿ ವಿಸ್ತರಣಾ ಶುಲ್ಕವನ್ನು ಕೆಆರ್‌ಇಡಿಎಲ್‌ಗೆ ಪಾವತಿಸತಕ್ಕದ್ದು.

......3

5. ಮೆ:: ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟೆಡ್ ರವರು ಪ್ರತಿ 6 ತಿಂಗಳಿಗೊಮ್ಮೆ ಯೋಜನೆಯ ಪ್ರಗತಿಯ ಕುರಿತು ಕೆಆರ್ಇಡಿಎಲ್‌ಗೆ ವರದಿ ಸಲ್ಲಿಸತಕ್ಕದ್ದು.

6. ಮೆ:: ಮೈಸೂರು ಮರ್ಕಂಟೈಲ್ ಕಂಪನಿ ಲಿಮಿಟೆಡ್ ರವರು ಡಿಪಿಆರ್ ಶುಲ್ಕವನ್ನು ನಿಯಮಾನುಸಾರ ಕೆ.ಆರ್.ಇ.ಡಿ.ಎಲ್. ಪಾವತಿಸತಕ್ಕದ್ದು.

7. ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ, ಗದಗ.
8. ಉಪ ಅರಣ್ಯ ಸಂರಕ್ಷಣಾಧಿಕಾರಿ ಗದಗ ಜಿಲ್ಲೆ, ಗದಗ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
11. ಮೆ:: ಮೈಸೂರು ಮರ್ಕನ್‌ಟೈಲ್ ಕಂಪನಿ ಲಿಮಿಟೆಡ್, # 201 & 202, ಶ್ರೇಷ್ಠ ಭೂಮಿ, ನಂ. 87, ಕೆ.ಆರ್. ರಸ್ತೆ, ಬಸವನಗುಡಿ, ಬೆಂಗಳೂರು-04.
12. ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.